# ಕನ್ನಡ ಪೋಸ್ಟ್

KANNADA POST

ಇದು ಸುದ್ದಿ ವಿಳಾಸ

ಸಂಪಾದಕ : ಮಂಜು ಬನವಾಸೆ

ಕನ್ನಡ ದಿನಪತ್ರಿಕೆ

ಹಾಸನ E-mail : kannadapostnews@gmail.com / ಕನ್ನಡ post Price: ₹1

Vol.No.02 | Issue. 45 | Pages. 2 | Date: 14-01-2026, WEDNESDAY RNI NO: KARKAN/2024/89601 Kannada Daily

ಸಂಪುಟ : 02 - ಸಂಚಿಕೆ : 45 - ಪುಟಗಳು : 2 14-01-2026 ಬುಧವಾರ Ph: 8762954248 ದರ : ₹1


## ಹಾಸನ ಜಿಲ್ಲೆಯ ವಿವಿಧೆಡೆ ಹೊಸ ವರ್ಷದ ಮೊದಲ ಮಳೆ

# ಕಾಫಿ ಬೆಳೆಗಾರರು, ರೈತರು ಕಂಗಾಲು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಹಾಸನ: ಹಾಸನ ಜಿಲ್ಲೆಯಲ್ಲಿ ಹೊಸ ವರ್ಷದ ಮೊದಲ ಮಳೆ ಸುರಿದಿದ್ದು, ಹಾಸನ, ಸಕಲೇಶಪುರ, ಆಲೂರು ಸೇರಿದಂತೆ ಜಿಲ್ಲೆಯ ವಿವಿಧ ಭಾಗಗಳಲ್ಲಿ ಮಳೆಯಾಗಿರುವ ವರದಿಯಾಗಿದೆ. ಅಕಾಲಿಕವಾಗಿ ಸುರಿದ ಮಳೆಯಿಂದಾಗಿ ಕಾಫಿ ಬೆಳೆಗಾರರು ಹಾಗೂ ರೈತರು ತೀವ್ರ ಸಂಕಷ್ಟಕ್ಕೆ ಒಳಗಾಗಿದ್ದಾರೆ.

ಕಾಫಿ ಫಸಲು ಬಿಡಿಸಿ ಒಣಗಲು ಹಾಕಿದ್ದ ಬೆಳೆಗಾರರಿಗೆ ದಿಡೀರ್ ಮಳೆ ದೊಡ್ಡ ಹೊಡೆತ ನೀಡಿದೆ. ಮಳೆಯ ನೀರಿನಲ್ಲಿ ಕಾಫಿ ಬೀಜಗಳು ಕೊಚ್ಚಿ ಹೋಗದಂತೆ ರಕ್ಷಿಸಿಕೊಳ್ಳಲು ಬೆಳೆಗಾರರು ಮತ್ತು ಕಾರ್ಮಿಕರು ಸುರಿಯುವ ಮಳೆಯಲ್ಲಿಯೇ ಪರದಾಡಿದ ದೃಶ್ಯಗಳು ಕಂಡುಬಂದವು.

ಹಲವೆಡೆ ಮನೆಯೊಳಗೆ ಕಾಫಿ ಫಸಲನ್ನು ಸ್ಥಳಾಂತರಿಸಿ ನೀರಿನಲ್ಲಿ ಕೊಚ್ಚಿ ಹೋಗದಂತೆ ತಡೆಯಲು ಕಾರ್ಮಿಕರು ಹರಸಾಹಸ ಪಟ್ಟರು.

ವಿಶೇಷವಾಗಿ ಬೇಲೂರು ತಾಲ್ಲೂಕಿನ ಅರೇಹಳ್ಳಿ ಹೋಬಳಿ ನೆಲ್ಕೆ ಗ್ರಾಮದಲ್ಲಿ ಮೊದಲ ಮಳೆಯ ಅವಾಂತರ ಗಂಭೀರವಾಗಿ ಕಂಡುಬಂದಿದ್ದು, ಕಾಫಿ ಬೆಳೆಗಾರರು ಕಂಗಾಲಾಗಿದ್ದಾರೆ.

ಇತ್ತ ಮಳೆಯಿಂದಾಗಿ ಜನಜೀವನ ಅಸ್ತವ್ಯಸ್ತಗೊಂಡಿದ್ದು, ವಾಹನ ಸವಾರರು ಹಾಗೂ ಬೀದಿ ಬದಿ ವ್ಯಾಪಾರಿಗಳು ತೀವ್ರ ತೊಂದರೆ ಅನುಭವಿಸಿದರು.

ಅಕಾಲಿಕ ಮಳೆಯು ಕೃಷಿ ಚಟುವಟಿಕೆಗಳಿಗೆ ಅಡ್ಡಿ ತಂದಿದ್ದು, ಮುಂದಿನ ದಿನಗಳಲ್ಲಿ ಬೆಳೆ ನಷ್ಟದ ಆತಂಕ ರೈತರಲ್ಲಿ ಮನೆಮಾಡಿದೆ.

ವರ್ಷದ ಮೊದಲ ಮಳೆಯೇ ಈ ರೀತಿ ಸಂಕಷ್ಟ ತಂದಿರುವುದು ಕಾಫಿ ಬೆಳೆಗಾರರು ಮತ್ತು ರೈತರಲ್ಲಿ ಚಿಂತೆ ಮೂಡಿಸಿದೆ.

## ಮುಂದುವರಿದ ಮಾನವ-ಆನೆ ಸಂಘರ್ಷ | ಪ್ರತಿಭಟನೆ ತೀವ್ರ

# ಸಕಲೇಶಪುರದ ಮೂಗಲಿಯಲ್ಲಿ ಕಾಡಾನೆ ದಾಳಿಗೆ ಮಹಿಳೆ ಬಲಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಸಕಲೇಶಪುರ: ತಾಲೂಕಿನ ಮೂಗಲಿ ಗ್ರಾಮದಲ್ಲಿ ಮಂಗಳವಾರ ಕಾಡಾನೆ ದಾಳಿಗೆ ಮಹಿಳೆ ಮೃತಪಟ್ಟಿದ್ದಾರೆ.

ಗ್ರಾಮದ ಶೋಭಾ (40) ಮೃತರು. ಕಾಫಿ ತೋಟದಲ್ಲಿ ಸುಣ್ಣ ಹಚ್ಚುವ ಕೆಲಸಕ್ಕೆ ತಮ್ಮ ತಾಯಿ ರಾಜಮ್ಮ ಹಾಗೂ ಇನ್ನೊಬ್ಬ ಮಹಿಳೆ ರಾಗಿಣಿ ಅವರೊಂದಿಗೆ ತೆರಳಿದ್ದರು. ಈ ವೇಳೆ ಏಕಾಏಕಿ ಕಾಫಿ ತೋಟದೊಳಗೆ ನುಗ್ಗಿದ ಒಂಟಿ ಸಲಗ ಕಾಡಾನೆ ಮಹಿಳೆಯರ ಮೇಲೆ ದಾಳಿ ನಡೆಸಿದೆ. ಕಾಡಾನೆಯಿಂದ ತಪ್ಪಿಸಿಕೊಳ್ಳಲು ಮೂವರು ಓಡಿದರೂ, ಶೋಭ ಅವರನ್ನು ಬೆನ್ನಟ್ಟಿ ಬಂದ ಕಾಡಾನೆ ತುಳಿದು ಸ್ಥಳದಲ್ಲೇ ಸಾಯಿಸಿದೆ. ದಾಳಿ ವೇಳೆ ಆನೆ ದಂತದಿಂದ ಮರಕ್ಕೆ ಹೊಡೆದಿರುವುದು ಸ್ಥಳದಲ್ಲಿ ಕಂಡುಬಂದಿದೆ. ಈ ಘಟನೆಯಿಂದ ಜಿಲ್ಲೆಯಲ್ಲಿ ನಿರಂತರವಾಗಿ ನಡೆಯುತ್ತಿರುವ ಮಾನವ-ಕಾಡಾನೆ ಸಂಘರ್ಷಕ್ಕೆ ಮತ್ತೊಂದು ಬಲಿಯಾಗಿದೆ.

ಘಟನೆಯ ಮಾಹಿತಿ ತಿಳಿದ ತಕ್ಷಣ ಅರಣ್ಯ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ದೌಡಾಯಿಸಿದರು. ಆದರೆ ಕಾಡಾನೆ ಹಾವಳಿ ನಿಯಂತ್ರಣದಲ್ಲಿ ಇಲಾಖೆಯ ನಿರ್ಲಕ್ಷ್ಯವಿದೆ ಎಂದು ಆರೋಪಿಸಿ ಸ್ಥಳೀಯರು ಮೃತದೇಹವನ್ನು ಮೇಲೆತ್ತಲು ಬಿಡದೆ ಪ್ರತಿಭಟನೆ ನಡೆಸಿದರು. ಕಾಡಾನೆಗಳ ಇರುವಿಕೆ ಕುರಿತು ಸರಿಯಾದ ಮಾಹಿತಿ ನೀಡುತ್ತಿಲ್ಲ. ಮನುಷ್ಯರ ಮೇಲೆ ದಾಳಿ ಮಾಡುವ ಪುಂಡಾನೆಗಳನ್ನು ಏಕೆ ಸೆರೆ ಹಿಡಿಯುತ್ತಿಲ್ಲ, ರೇಡಿಯೋ ಕಾಲರ್ ಅಳವಡಿಸದೆ ನಿರ್ಲಕ್ಷ್ಯ ವಹಿಸಲಾಗಿದೆ ಎಂದು ಗ್ರಾಮಸ್ಥರು ಅರಣ್ಯ ಅಧಿಕಾರಿಗಳ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ನಿಮ್ಮ ಪರಿಹಾರದ ಹಣ ನಮಗೆ ಬೇಡ, ಶಾಶ್ವತ ಪರಿಹಾರ ಬೇಕು ಎಂದು ಆಕ್ರೋಶ ವ್ಯಕ್ತಪಡಿಸಿದರು. ಶವದೊಂದಿಗೆ ಸ್ಥಳದಲ್ಲೇ ಧರಣಿ ನಡೆಸಿದ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ, ಶಾಸಕ ಸಿಮೆಂಟ್ ಮಂಜು, ಮಾಜಿ ಶಾಸಕ ಎಚ್.ಕೆ. ಕುಮಾರಸ್ವಾಮಿ, ತಾಲೂಕು ಗ್ಯಾರಂಟಿ ಅನುಷ್ಠಾನ ಯೋಜನೆ ಅಧ್ಯಕ್ಷ ಮುರಳಿ ಮೋಹನ್ ಹಾಗೂ ಡಿಎಫ್ಒ ಸೌರಭ್ ಕುಮಾರ್ ಘಟನಾ ಸ್ಥಳಕ್ಕೆ ಭೇಟಿ ನೀಡಿದರು. ಮೃತರ ಕುಟುಂಬಕ್ಕೆ ಸಾಂತ್ವನ ಹೇಳಿ ಸಮಸ್ಯೆ ಬಗೆಹರಿಸುವ ಭರವಸೆ ನೀಡಿದರು.

ಅಮಾಯಕರ ಸಾವಿಗೆ ನ್ಯಾಯ ಬೇಕು, 50 ಲಕ್ಷ ರೂ. ಪರಿಹಾರ ನೀಡಬೇಕು ಎಂದು ಗ್ರಾಮಸ್ಥರು ಪಟ್ಟು ಹಿಡಿದರು. ಶಾಸಕ ಸಿಮೆಂಟ್ ಮಂಜು ಹಾಗೂ ಮುರಳಿ ಮೋಹನ್ ಅವರು ಅರಣ್ಯ ಸಚಿವ ಈಶ್ವರ ಖಂಡ್ರೆ ಅವರಿಗೆ ದೂರವಾಣಿ ಮೂಲಕ ಮಾತನಾಡಿ, ಕಾಡಾನೆ ಹಾವಳಿಗೆ ಶಾಶ್ವತ ಪರಿಹಾರ, ಆನೆಗಳ ಸ್ಥಳಾಂತರ ಹಾಗೂ ಪರಿಹಾರ ಹೆಚ್ಚಳಕ್ಕೆ ಒತ್ತಾಯಿಸಿದರು.

ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಅವರ ಭರವಸೆಯ ಹಿನ್ನೆಲೆಯಲ್ಲಿ ಪ್ರತಿಭಟನೆಯನ್ನು ಹಿಂಪಡೆಯಲಾಯಿತು.

ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ಆಂಬ್ಯುಲೆನ್ಸ್ ಮೂಲಕ ಆಸ್ಪತ್ರೆಗೆ ರವಾನಿಸಲಾಯಿತು. ಈ ವೇಳೆ ತಾಲೂಕು ಕಾಂಗ್ರೆಸ್ ವತಿಯಿಂದ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಭೈರಮುಡಿ ಚಂದ್ರು ಹಾಗೂ ಮುರಳಿ ಮೋಹನ್ ಅವರು ಪಕ್ಷದ ವತಿಯಿಂದ ಎರಡು ಲಕ್ಷ ರೂ. ನೀಡುವ ವಾಗ್ದಾನ ನೀಡಿದರು. ಶಾಸಕ ಸಿಮೆಂಟ್ ಮಂಜು, ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಹಾಗೂ ಡಿಎಫ್ಒ ಸೌರಭ್ ಕುಮಾರ್ ಅವರು ಮೃತ ಶೋಭ ಅವರ ತಾಯಿಗೆ 20 ಲಕ್ಷ ರೂ. ಪರಿಹಾರದ ಚೆಕ್ ವಿತರಿಸಿದರು.

### ಕಣ್ಣೀರಿಟ್ಟ ಶೋಭಾ ತಾಯಿ

ಘಟನೆಯ ವೇಳೆ ಶೋಭ ಅವರ ತಾಯಿ ರಾಜಮ್ಮ ಜಿಲ್ಲಾಧಿಕಾರಿ ಎದುರು ಕಣ್ಣೀರಿಟ್ಟು, ನಾನು ಕ್ಯಾನ್ಸರ್ ರೋಗಿ, ನನ್ನ ಮಗಳೇ ನನ್ನನ್ನು ಸಾಕುತ್ತಿದ್ದಳು. ಎರಡು ತಿಂಗಳ ಹಿಂದಷ್ಟೇ ಮಗಳ ಮದುವೆ ಮಾಡಿದ್ದೆ. ಈಗ ನನ್ನ ಕಷ್ಟ ಯಾರಿಗೆ ಹೇಳಲಿ ಎಂದು ರೋದಿಸಿದರು. ನಾನಾದರೂ ಸತ್ತು ಮಗಳು ಬದುಕಬೇಕಿತ್ತು ಎಂದು ಅವರು ಆಕ್ರಂದನ ವ್ಯಕ್ತಪಡಿಸಿದರು.

### ಜ. 16ಕ್ಕೆ ಸಚಿವರೊಂದಿಗೆ ಸಭೆ

ಜ. 16ರಂದು ಸಕಲೇಶಪುರದಲ್ಲಿ ನಡೆಯಲಿರುವ ಜನಸ್ಪಂದನಾ ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಭೈರೇಗೌಡ ಅವರು ಕಾಫಿ ಬೆಳೆಗಾರರು, ಕಾಡಾನೆ ದಾಳಿಯಿಂದ ಮೃತಪಟ್ಟವರ ಕುಟುಂಬಸ್ಥರು ಹಾಗೂ ಹೋರಾಟಗಾರರೊಂದಿಗೆ ಸಭೆ ನಡೆಸಿ ಬೇಡಿಕೆಗಳನ್ನು ಆಲಿಸಲಿದ್ದಾರೆ ಎಂದು ಜಿಲ್ಲಾಧಿಕಾರಿ ತಿಳಿಸಿದರು.

# 1.50ಕೋಟಿ ರೂ. ಅನುದಾನ ಬಿಡುಗಡೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಳೇಬೀಡು: ಬಂಡಿಲಕ್ಕನಕೊಪ್ಪಲು ಬಳಿ ದ್ವಾರಸಮುದ್ರ, ಕೆರೆಯ ಸಹಾಯಕ್ಕೆ ಪಿಕಪ್ ಹಾಗೂ ಸೇತುವೆ ನಿರ್ಮಿಸಲು ಸರ್ಕಾರದಿಂದ 150 ಲಕ್ಷ ಹಣ ಮಂಜೂರಾಗಿದೆ ಎಂದು ತಾಲ್ಲೂಕು ಗ್ಯಾರಂಟಿ ಅನುಷ್ಟಾನ ಸಮಿತಿ ಸದಸ್ಯ ಬಿ.ಎಂ.ಸುರೇಶ್ ಹೇಳಿದರು. ಅವರು ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿದರು.

ದ್ವಾರಸಮುದ್ರ ಕೆರೆ ಕೋಡಿ ಬಿದ್ದಾಗ, ಬಂಡಿಲಕ್ಕನಕೊಪ್ಪಲು ಬಳಿ ಜಮೀನು ಜಲಾವೃತವಾಗವುದು, ಸೇತುವೆ ಮುಳುಗಿ ಜಮೀನುಗಳು ಸಂಪರ್ಕ ಇಲ್ಲವಾಗುವುದು ಮಾಮೂಲಿಯಾಗಿದೆ.

ಈ ವರ್ಷ ಚಿತ್ರದುರ್ಗದ ಮಾರಿಕಣಿವೆಗೆ ಎತ್ತಿನಹೊಳೆ ಯೋಜನೆಯ ನೀರನ್ನು ದ್ವಾರ ಸಮುದ್ರ ಕೆರೆ ಮುಖಾಂತರ ಹರಿಸಿದ್ದರಿಂದ ನೀರಿನ ಹರಿವು ಹೆಚ್ಚಾಗಿ ರೈತರು ಪರದಾಡುವಂತಾಗಿತ್ತು.

ಜಮೀನಿನಿಂದ ಫಸಲು ಸಾಗಿಸಲು, ಮೇವು ತರಲು ಕಷ್ಟವಾಗಿತ್ತು. ಮೇಯಲು ಜಾನುವಾರು, ಆಡು, ಕುರಿಗಳನ್ನು ಜಮೀನಿಗೆ ಮೇಯಿಸಲು ಕರೆದೊಯ್ಯಲು ತೊಂದರೆ ಆಗಿತ್ತು. ಈ ಕುರಿತು ಗ್ರಾಮಸ್ತರು ಎಐಸಿಸಿ ಸದಸ್ಯ ಹಾಗೂ ಮಾಜಿ ಸಚಿವ ಗಂಡಸಿ ಶಿವರಾಂ ಅವರನ್ನು ಸಂಪರ್ಕಿಸಿದ್ದೇವು. ಸರ್ಕಾರ, ಸಣ್ಣ ನೀರಾವರಿ ಇಲಾಖೆ ಹಾಗೂ ಸಚಿವಾಲಯದಲ್ಲಿ ಅವರು ವಿಷಯ ಪ್ರಸ್ತಾಪಿಸಿ, ಕೆಲಸ ಕಾರ್ಯಗತಗೊಳಿಸಿದರು. ಕಾಮಗಾರಿ ಪೂರ್ಣಗೊಂಡ ನಂತರ ಅನಾದಿ ಕಾಲದ ಸಮಸ್ಯೆ ಬಗೆಹರಿದಂತಾಗುತ್ತದೆ ಎಂದು ಸುರೇಶ್ ಹೇಳಿದರು.

# ಅಸುರಕ್ಷಿತ ಲೈಂಗಿಕ ಸಂಪರ್ಕವೇ ಹೆಚ್ಐವಿ ಗೆ ಕಾರಣ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಚನ್ನರಾಯಪಟ್ಟಣ: ಸಾಮಾನ್ಯ ಜನರಲ್ಲಿಯೇ ಹೆಚ್ಐವಿ ಸೋಂಕು ಕಾಣಿಸಿಕೊಳ್ಳುತ್ತಿರುವುದು ಅಪಾಯಕಾರಿ ಬೆಳವಣಿಗೆಯಾಗಿದೆ ಎಂದು ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ಪ್ರತಿಬಂಧಕ ಘಟಕದ ಜಿಲ್ಲಾ ಮೇಲ್ವಿಚಾರಕ ರವಿಕುಮಾರ್ ಹೇಳಿದರು.

ಪಟ್ಟಣದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆ ಆವರಣದಲ್ಲಿ ಜಿಲ್ಲಾ ಆರೋಗ್ಯ ಕೇಂದ್ರ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ಪ್ರತಿಬಂಧಕ ಘಟಕ, ತಾಲ್ಲೂಕು ಆರೋಗ್ಯ ಅಧಿಕಾರಿಗಳ ಕಚೇರಿ ಹಾಗೂ ವೈದ್ಯ ನರ್ಸಿಂಗ್ ಮತ್ತು ಪ್ಯಾರಾಮೆಡಿಕಲ್ ಕಾಲೇಜು ಸಹಯೋಗದಲ್ಲಿ ಹಮ್ಮಿಕೊಂಡಿದ್ದ ವಿಶ್ವ ಏಡ್ಸ್ ದಿನ ಮತ್ತು ಜನಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಸೋಂಕಿತರಿಗೆ ಅರಿವು ಮೂಡಿಸಬಹುದು ಆದರೆ ಸಾಮಾನ್ಯರಿಗೆ ಜಾಗೃತಿ ಮೂಡಿಸಲು ಸಾಧ್ಯವಿಲ್ಲ. ಜೀವನಶೈಲಿ ಬದಲಾಗಿದ್ದು ಜಾಗೃತಿ ಇಲ್ಲವೇ ಅರಿವು ಪಡೆಯುವಲ್ಲಿ ವಿಫಲರಾಗುತ್ತಿದ್ದಾರೆ. ಹಾಳಾಗಲು ಅಥವಾ ಬದುಕಲು ಅವಕಾಶ ಎಂಬುದು ನಮ್ಮ ಕೈಯಲ್ಲಿಯೇ ಇದೆ. ಅದನ್ನು ಆಯ್ಕೆ ಮಾಡಿಕೊಳ್ಳುವ ವಿವೇಚನೆ ನಮ್ಮಲ್ಲಿ ಇರಬೇಕು ಎಂದು ಎಚ್ಚರಿಸಿದರು.

ಹೊಸಬರಿಗೆ ಸೋಂಕು ಹರಡಲು ಹಳೆಯ ಸೋಂಕಿತರೆ ಕಾರಣ. ಪ್ರಸಕ್ತ ಸಾಲಿನಲ್ಲಿ ಭಾರತ 3 ನೇ ಸ್ಥಾನದಲ್ಲಿದ್ದರೆ ಕರ್ನಾಟಕ 8 ನೇ ಸ್ಥಾನದಲ್ಲಿದೆ. ಸೋಂಕು ಹರಡದಂತೆ ನಿಯಂತ್ರಿಸುವಲ್ಲಿ ಹಾಗೂ ಅರಿವು ಮೂಡಿಸುವುದು ಆರೋಗ್ಯ ಇಲಾಖೆಯ ಕೆಲಸವಷ್ಟೇ ಅಲ್ಲದೆ ಸಾರ್ವಜನಿಕರು ಭಾಗವಹಿಸುವಿಕೆ ಮುಖ್ಯವಾಗಲಿದೆ ಎಂದರು.

ಆಡಳಿತ ವೈದ್ಯಾಧಿಕಾರಿ ಡಾ. ಯುವರಾಜ್ ಮಾತನಾಡಿ, ಅವಿವಾಹಿತರಲ್ಲಿ ಎಚ್ಐವಿ ಸೋಂಕು ಕಾಣಿಸಿಕೊಳ್ಳುತ್ತಿರುವುದು ಅಪಾಯದ ಸಂಗತಿ. ಈ ಸೋಂಕಿಗೆ ನಿರ್ದಿಷ್ಟ ಚಿಕಿತ್ಸೆ ಇಲ್ಲದ ಕಾರಣ ಅರಿವು ಮೂಡಿಸುವುದು ಹಾಗೂ ಅರಿವು ಪಡೆದುಕೊಳ್ಳುವುದು ಅತಿ ಮುಖ್ಯ. ಅಸುರಕ್ಷಿತ ಲೈಂಗಿಕ ಸಂಪರ್ಕವೇ ಮುಖ್ಯ ಕಾರಣವಾಗಿದ್ದು ಜಾಗೃತಿಗೊಳ್ಳುವ ಮೂಲಕ ಏಡ್ಸ್ ಮುಕ್ತ ದೇಶ ಮಾಡುವುದು ಎಲ್ಲರ ಜವಾಬ್ದಾರಿ ಎಂದರು. ಹೆಚ್ಐವಿ ಅಂಟು ರೋಗವಲ್ಲ. ಆದರೆ ಯುವ ಸಮುದಾಯವು ಎಚ್ಚೆತ್ತುಕೊಳ್ಳದ ಪರಿಣಾಮ ದಿನದಿಂದ ದಿನಕ್ಕೆ ಪ್ರಕರಣಗಳ ಸಂಖ್ಯೆ ಏರಿಕೆಯಾಗುತ್ತಿದೆ. ಅರಿವು ಮೂಡಿಸಿದರು ಸಹ ಜಾಗೃತಿಗೊಳ್ಳದ ಪರಿಣಾಮವೇ ಸೋಂಕು ಹರಡಲು ಪ್ರಮುಖ ಕಾರಣವಾಗಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಎಚ್ಐವಿ ಎಂಬುದು ನಡವಳಿಕೆಯಿಂದ ಬರುವ ಕಾಯಿಲೆ. 18 ರಿಂದ 40 ವರ್ಷದ ವಯಮಿತಿಯ ಒಳಗಿನ ವ್ಯಕ್ತಿಗಳಲ್ಲಿಯೇ ಹೆಚ್ಚಾಗಿ ಕಾಣಿಸಿಕೊಳ್ಳುತ್ತಿದೆ. ಶೇ.70 ರಷ್ಟು ಅವಿವಾಹಿತ ಯುವ ಜನತೆಯಲ್ಲಿ ಕಾಣಿಸಿಕೊಳ್ಳುತ್ತಿರುವುದು ಅಪಾಯದ ಮುನ್ಸೂಚನೆಯಾಗಿದೆ ಎಂದು ತಿಳಿಸಿದರು.

# ಪಕ್ಷ ಬಯಸಿದರೆ ಅರಸೀಕೆರೆಯಿಂದಲೇ ಸ್ಪರ್ಧೆ: ಹೆಚ್.ಡಿ.ರೇವಣ್ಣ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಆಲೂರು: ಪಕ್ಷ ನಿರ್ಧರಿಸಿದರೆ ಅರಸೀಕೆರೆಯಲ್ಲಿಯೇ ಸ್ಪರ್ಧಿಸುವ ಮೂಲಕ ಶಾಸಕ ಶಿವಲಿಂಗೇಗೌಡ ಹಾಕಿರುವ ಸವಾಲನ್ನು ಸ್ವೀಕರಿಸಲು ಸಿದ್ಧವಿರುವುದಾಗಿ ಹೊಳೆನರಸೀಪುರ ಕ್ಷೇತ್ರ ಶಾಸಕ ಎಚ್.ಡಿ ರೇವಣ್ಣ ತಿಳಿಸಿದರು.

ತಾಲೂಕಿನ ಪಾಳ್ಯ ಗ್ರಾಮದಲ್ಲಿರುವ ಜೆಡಿಎಸ್ ಪಕ್ಷದ ಅಧ್ಯಕ್ಷ ಕೆ ಎಸ್ ಮಂಜೇಗೌಡರ ನಿವಾಸದಲ್ಲಿ ಜ 24 ನೇ ರಂದು ಹಾಸನ ಜಿಲ್ಲೆಯಲ್ಲಿ ಹಮ್ಮಿಕೊಂಡಿರುವ ಜೆಡಿಎಸ್ ಬೃಹತ್ ಸಮಾವೇಶದ ಸಿದ್ಧತೆ ಕುರಿತಾಗಿ ಕಾರ್ಯಕರ್ತರ ಅಭಿಪ್ರಾಯವನ್ನು ಸಂಗ್ರಹಿಸುವ ನಿಟ್ಟಿನಲ್ಲಿ ಹಮ್ಮಿಕೊಂಡಿದ್ದ ಕಾರ್ಯಕರ್ತರ ಸಭೆಯನ್ನು ಉದ್ಘಾಟಿಸಿ ಮಾತನಾಡಿ ರಾಜ್ಯ ಕಾಂಗ್ರೆಸ್ ಸರ್ಕಾರವು ಆಡಳಿತ ಯಂತ್ರವನ್ನು ದುರುಪಯೋಗ ಮಾಡಿಕೊಂಡು ಜಿಲ್ಲೆಯಲ್ಲಿ ಎರಡು ಸಮಾವೇಶಗಳನ್ನು ಮಾಡುವ ಮೂಲಕ ಜೆಡಿಎಸ್ ಪಕ್ಷದ ವರ್ಚಸ್ಸನ್ನು ಕುಂದಿಸುವ ಪ್ರಯತ್ನವನ್ನು ಮಾಡಲು ಹೊರಟಿದೆ ಆದರೆ ಹಾಸನ ಜಿಲ್ಲೆಯಲ್ಲಿ ಕಾಂಗ್ರೆಸ್ ನವರ ಆಟ ನಡೆಯುವುದಿಲ್ಲ ಮೊದಲು ಕಾಂಗ್ರೆಸ್ ಪಕ್ಷದ ಮುಖ್ಯಮಂತ್ರಿ ಉಪಮುಖ್ಯಮಂತ್ರಿಗಳು ಉಸ್ತುವಾರಿ ಸಚಿವರುಗಳು ಸರ್ಕಾರ ಬಂದು ಕಳೆದ ಎರಡುವರೆ ವರ್ಷಗಳಲ್ಲಿ ಹಾಸನ ಜಿಲ್ಲೆಗೆ ಬಿಡುಗಡೆ ಮಾಡಿರುವ ಅನುದಾನಗಳ ಬಗ್ಗೆ ಶ್ವೇತಪತ್ರವನ್ನು ಹೊರಡಿಸಲಿ ನಮ್ಮ ಸರ್ಕಾರವಿದ್ದಾಗ ಹಾಗೂ ಕಳೆದ ಅವಧಿಯಲ್ಲಿ ಬಿಜೆಪಿ ಸರ್ಕಾರವಿದ್ದಾಗ ಜಿಲ್ಲೆಗೆ ತಂದಿರುವ ಅನುದಾನದಿಂದ ಮಾಡಿರುವ ಅಭಿವೃದ್ಧಿ ಕಾರ್ಯಗಳನ್ನು ನಾವು ಮಾಡಿರುವುದಾಗಿ ಕಾಂಗ್ರೆಸ್ಸಿ ನವರು ಬಿಂಬಿಸಿಕೊಂಡು ಉದ್ಘಾಟನೆಗಳನ್ನು ಮಾಡಿರುವುದು ಖಂಡನೀಯವಾಗಿದೆ ಈ ಸರ್ಕಾರದ ಎರಡುವರೆ ವರ್ಷ ಅವಧಿಯಲ್ಲಿ ರಾಜ್ಯದ ಅಭಿವೃದ್ಧಿಯು ಸುಮಾರು ಹತ್ತು ವರ್ಷಗಳಷ್ಟು ಹಿಂದಕ್ಕೋಗಿದ್ದು ಬರೀ ರಸ್ತೆಗಳ ಗುಂಡಿಯನ್ನು ಮುಚ್ಚುವ ಕಾರ್ಯದಲ್ಲಿ ಮಾತ್ರ ತೊಡಗಿಕೊಂಡಿದ್ದು ಇದಕ್ಕೆ ರಾಜ್ಯದ ಜನತೆ ಮುಂದಿನ 2028ರ ವಿಧಾನಸಭಾ ಚುನಾವಣೆಯಲ್ಲಿ ತಕ್ಕ ಪಾಠವನ್ನು ಕಾಂಗ್ರೆಸ್ ಪಕ್ಷಕ್ಕೆ ಕಲಿಸುತ್ತಾರೆ ಅಲ್ಲದೆ ನಮ್ಮ ಪಕ್ಷವು ರಾಜ್ಯ ಮತ್ತು ರಾಷ್ಟ್ರೀಯ ಮಟ್ಟದಲ್ಲಿ ಬಿಜೆಪಿ ಪಕ್ಷದ ಜೊತೆ ಮೈತ್ರಿ ಅನ್ನು ಮಾಡಿಕೊಂಡಿದ್ದು ಹಾಸನ ವಿಧಾನಸಭಾ ಕ್ಷೇತ್ರ ಮತ್ತು ಸಕಲೇಶಪುರ ವಿಧಾನಸಭಾ ಕ್ಷೇತ್ರಗಳಲ್ಲಿ ಕೆಲವು ಮೈತ್ರಿ ನಾಯಕರು ತಮ್ಮ ಪಕ್ಷವನ್ನ ಬಿಟ್ಟು ಬೇರೆ ಪಕ್ಷದ ನಾಯಕರ ಜೊತೆ ರಾಜಕೀಯ ಲೆಕ್ಕಾಚಾರಗಳನ್ನು ಆರಂಭಿಸಿರುವುದು ನಮ್ಮ ಗಮನಕ್ಕೆ ಬಂದಿದ್ದು ಈ ಬಗ್ಗೆ ರಾಜ್ಯ ಮತ್ತು ರಾಷ್ಟ್ರೀಯ ಮಟ್ಟದ ನಮ್ಮ ಪಕ್ಷ ಮತ್ತು ಬಿಜೆಪಿ ಪಕ್ಷದ ವರಿಷ್ಠರು ನಿರ್ಧರಿಸುತ್ತಾರೆ ಒಟ್ಟಾರೆ ಹಾಸನ ಜಿಲ್ಲೆಯಲ್ಲಿ ಜೆಡಿಎಸ್ ನ ಶಕ್ತಿ ಏನು ಎಂಬುದನ್ನು 24 ರಂದು ನಡೆಯುವ ಸಮಾವೇಶದ ಮೂಲಕ ತಕ್ಕ ಉತ್ತರವನ್ನು ನೀಡಬೇಕೆಂದು ತಿಳಿಸಿದರು.

ಮಾಜಿ ಸಚಿವ ಹೆಚ್.ಕೆ ಕುಮಾರಸ್ವಾಮಿ ಮಾತನಾಡಿ ಇದೇ ತಿಂಗಳು 24 ನೇ ತಾರೀಕು ಹಾಸನದಲ್ಲಿ ನಡೆಯುವ ಜೆಡಿಎಸ್ ಬೃಹತ್ ಸಮಾವೇಶಕ್ಕೆ ನಮ್ಮ ಪಕ್ಷದ ವರಿಷ್ಠರಾದ ಮಾಜಿ ಪ್ರಧಾನ ಮಂತ್ರಿಗಳಾದ ಎಚ್ ಡಿ ದೇವೇಗೌಡ, ಎಚ್ ಡಿ ಕುಮಾರಸ್ವಾಮಿ ಅವರುಗಳು ಭಾಗವಹಿಸುತ್ತಿದ್ದು ನಮ್ಮ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಪ್ರತಿ ಬೂತುಗಳಿಂದ ಒಂದೊಂದು ಬಸ್ಸಿ ನಲ್ಲಿ ನಮ್ಮ ಪಕ್ಷದ ಮತದಾರರನ್ನು ಕರೆ ತರುವ ಜವಾಬ್ದಾರಿಯು ನಿಮ್ಮೆಲ್ಲರ ಮೇಲೆ ಇದ್ದು ಆಲೂರು ತಾಲೂಕಿನಿಂದ 5000ಕ್ಕೂ ಹೆಚ್ಚು ಜನರನ್ನು ಈ ಸಮಾವೇಶಕ್ಕೆ ಬರುವಂತೆ ಎಲ್ಲಾ ವ್ಯವಸ್ಥೆ ಮಾಡಬೇಕು ಕಳೆದ 2023ರ ಚುನಾವಣೆಯಲ್ಲಿ ನಮ್ಮ ಪಕ್ಷ ಕೆಲವೇ ಮತಗಳಿಂದ ಸೋಲನ್ನು ಅನುಭವಿಸಿದೆ ಆದರೆ ಈ ಬಗ್ಗೆ ಯಾವುದೇ ಕಾರ್ಯಕರ್ತರು ಎದೆಗುಂದುವ ಅವಶ್ಯಕತೆ ಇಲ್ಲ ಮುಂದಿನ 2028 ರ ಚುನಾವಣೆಯಲ್ಲಿ ಈ ಕ್ಷೇತ್ರವನ್ನು ಮರಳಿ ನಮ್ಮ ಪಕ್ಷವು ತನ್ನ ತೆಕ್ಕೆಗೆ ತೆಗೆದುಕೊಳ್ಳುತ್ತದೆ ಇದರಲ್ಲಿ ಯಾವುದೇ ಸಂದೇಹ ಬೇಡ ಎಂದು ಕಾರ್ಯಕರ್ತರರಲ್ಲಿ ಭರವಸೆ ಮೂಡಿಸಿದರು. ಈ ಸಂದರ್ಭದಲ್ಲಿ ಜೆಡಿಎಸ್ ತಾಲೂಕು ಅಧ್ಯಕ್ಷ ಕೆ.ಎಸ್ ಮಂಜೇಗೌಡ, ಜಿ.ಪಂ ಮಾಜಿ ಸದಸ್ಯೆ ಸಂಚಲ ಕುಮಾರಸ್ವಾಮಿ, ಪ.ಪಂ ಮಾಜಿ ಅಧ್ಯಕ್ಷ ಡಿಎಸ್ ಜಯಣ್ಣ, ಧರ್ಮರಾಜು, ಹಾ.ಹಾ.ಓ ನಿರ್ದೇಶಕ ಪಿ.ಎಲ್ ನಿಂಗರಾಜು, ಜಿಲ್ಲಾ ಸಹಕಾರ ಸಂಘ ಒಕ್ಕೂಟದ ಅಧ್ಯಕ್ಷ ಪ್ರಕಾಶ್, ತಾ.ಪಂ ಮಾಜಿ ಸದಸ್ಯ ನಟರಾಜು ನಾಕಲಗೂಡು, ಸಿ.ವಿ ಲಿಂಗರಾಜು, ಹಿರಿಯ ಮುಖಂಡರಾದ ಬಿ.ಸಿ ಶಂಕರಾಚಾರ್, ಕದಾಳು ರಾಜಪ್ಪಗೌಡ, ಗಂಗಾಧರಪ್ಪ, ಗೇಕರವಳ್ಳಿ ಬಸವರಾಜು, ಸೇರಿದಂತೆ ಕಾರ್ಯಕರ್ತರು ಹಾಗೂ ಮುಖಂಡರು ಉಪಸ್ಥಿತರಿದ್ದರು.

## ಯುಗ ಯೋಗಿ ಡಾ. ಶ್ರೀ ಬಾಲಗಂಗಾಧರನಾಥ ಸ್ವಾಮೀಜಿ ಪುಣ್ಯಾರಾಧನೆ

# ಭಕ್ತಿಪೂರ್ವಕ ಮೆರವಣಿಗೆ | ಸಾವಿರಾರು ಭಕ್ತರು ಭಾಗಿ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಭೈರವೈಕ್ಯ, ಯುಗಯೋಗಿ ಶ್ರೀ ಡಾ. ಬಾಲಗಂಗಾಧರನಾಥ ಮಹಾಸ್ವಾಮೀಜಿಯವರ 13ನೇ ವರ್ಷದ ಪುಣ್ಯಾರಾಧನಾ ಕಾರ್ಯಕ್ರಮವು ನಗರದ ಶ್ರೀ ಆದಿಚುಂಚನಗಿರಿ ಸಮುದಾಯ ಭವನದಲ್ಲಿ ಮಂಗಳವಾರ ಶ್ರದ್ಧಾಭಕ್ತಿಯಿಂದ ಅರ್ಥಪೂರ್ಣವಾಗಿ ನೆರವೇರಿತು.

ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಹಾಸನ ಮಠದ ಶ್ರೀ ಶಂಭುನಾಥ ಸ್ವಾಮೀಜಿ ಪ್ರಾತಃಕಾಲ 6 ಗಂಟೆಗೆ ಮಠದ ಆವರಣದಲ್ಲಿರುವ ಮಹಾಗಣಪತಿ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಿ, ಗೋ ಪೂಜೆ ನೆರವೇರಿಸುವ ಮೂಲಕ ಶ್ರೀ ಡಾ. ಬಾಲಗಂಗಾಧರನಾಥ ಮಹಾಸ್ವಾಮೀಜಿಯವರ 13ನೇ ಪುಣ್ಯಾರಾಧನಾ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಯುಗ ಯೋಗಿ ಶ್ರೀ ಡಾ. ಬಾಲಗಂಗಾಧರನಾಥ ಮಹಾಸ್ವಾಮೀಜಿಯವರ ಪುತ್ಥಳಿಯನ್ನು ಶ್ರೀ ಮಠದ ಆವರಣದಿಂದ ಎಂ.ಜಿ. ರಸ್ತೆಯ ಮೂಲಕ ಮುತ್ತಿನ ಪಲ್ಲಕ್ಕಿಯಲ್ಲಿ ಉತ್ಸವದ ಮೂಲಕ ಆದಿಚುಂಚನಗಿರಿ ಸಮುದಾಯ ಭವನದವರೆಗೂ ನೂರಾರು ಸದ್ಭಕ್ತರೊಡನೆ ಮೆರವಣಿಗೆಯಲ್ಲಿ ತರಲಾಯಿತು.

ಪುಣ್ಯಾರಾಧನಾ ವಿಧಿ ವಿಧಾನಗಳು ಶ್ರೀ ಶಂಭುನಾಥ ಸ್ವಾಮೀಜಿ ನೇತೃತ್ವದಲ್ಲಿ ನೆರವೇರಿದವು. ಶ್ರೀ ಡಾ. ಬಾಲಗಂಗಾಧರನಾಥ ಮಹಾಸ್ವಾಮೀಜಿಯವರ ಪುತ್ಥಳಿ ಎದುರು ನೈವೇದ್ಯ ಇಟ್ಟು ಅಷ್ಟಾವಧಾನ ಸೇವೆ ಸಲ್ಲಿಸಿ, ಮಹಾಮಂಗಳಾರತಿ ನೆರವೇರಿಸಲಾಯಿತು.

ಈ ವೇಳೆ ವಿವಿಧ ಮಠಗಳ ಮಠಾಧೀಶರು, ಜನಪ್ರತಿನಿಧಿಗಳು, ಸಂಘ ಸಂಸ್ಥೆಗಳ ಮುಖಂಡರು, ಮಠದ ಸದ್ಭಕ್ತರು, ಶ್ರೀ ಆದಿಚುಂಚನಗಿರಿ ಶಿಕ್ಷಣ ಸಂಸ್ಥೆಯ ಸಿಬ್ಬಂದಿ ಶ್ರೀಗಳ ಪುತ್ಥಳಿಗೆ ಪುಷ್ಪ ನಮನ ಸಲ್ಲಿಸಿ, ಶಂಭುನಾಥ ಶ್ರೀಯವರ ಆಶೀರ್ವಾದ ಪಡೆದರು. ನಂತರ ಭಕ್ತರಿಗೆ ಪ್ರಸಾದ ವಿನಿಯೋಗ ನಡೆಸಲಾಯಿತು.

ಶ್ರೀ ಕಾಲಭೈರವೇಶ್ವರ ಭಜನಾ ಮಂಡಳಿ, ಶ್ರೀ ಶಂಕರ ಭಜನಾ ಮಂಡಳಿ, ಶ್ರೀ ಶನೈಶ್ವರಸ್ವಾಮಿ ಭಜನಾ ಮಂಡಳಿ, ಶ್ರೀ ಮಾರುತಿ ಭಜನಾ ಮಂಡಳಿ, ಶ್ರೀ ಛಾಯಾಪುತ್ರ ಭಜನಾ ಮಂಡಳಿ ಸೇರಿದಂತೆ ವಿವಿಧ ಭಜನಾ ಮಂಡಳಿಯವರು ಕಾರ್ಯಕ್ರಮ ನಡೆಸಿಕೊಟ್ಟರು.

ಕಾರ್ಯಕ್ರಮದಲ್ಲಿ ಕೊಡ್ಲಿಪೇಟೆ ಕಿರಿಕೊಡಲಿ ಮಠದ ಶ್ರೀ ಸದಾಶಿವ ಸ್ವಾಮೀಜಿ, ಬೆಂಗಳೂರು ವಿಜಯನಗರದ ಶ್ರೀ ತ್ರಿಲೋಕಾದೀಶ ಸ್ವಾಮೀಜಿ, ಬೆಂಗಳೂರು ಹಂಪಿ ನಗರ ಪತಂಜಲಿ ಯೋಗಾಶ್ರಮದ ಶ್ರೀ ಪ್ರಕಾಶ್ ಯೋಗಿ ಗುರೂಜಿ, ದೊಡ್ಡಸಾಗರ ರಾಮಕೃಷ್ಣ ಆಶ್ರಮದ ಸ್ವಾಮಿ ಮೇದಾನಂದ ಸ್ವಾಮೀಜಿ, ನೆಲಮಂಗಲ ಶಿವಾನಂದ ಆಶ್ರಮದ ಶ್ರೀ ರಮಾನಂದ ಸ್ವಾಮೀಜಿ, ಕೆಂಬಾಳು ಮಠದ ಶ್ರೀ ಹಿರಿಯಣ್ಣ ಸ್ವಾಮೀಜಿ, ಶ್ರೀ ಸಾಯಿಶ್ರೀ ಕೀರ್ತಿನಾಥ ಸ್ವಾಮೀಜಿ, ವಿವಿಧ ಮಠಗಳ ಮಠಾಧೀಶರು ಸಾನ್ನಿಧ್ಯ ವಹಿಸಿದ್ದರು. ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಡಾ.ಎಚ್.ಎಲ್.ಮಲ್ಲೇಶ್‌ಗೌಡ, ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಜೆ.ಆರ್.ಕೆಂಚೇಗೌಡ, ಜನಪ್ರತಿನಿಧಿಗಳು ಹಾಗೂ ಸಮಾಜ ಮುಖಂಡರು ಭಾಗವಹಿಸಿದ್ದರು.

### ಭಕ್ತಿ ಭಾವದ ಮುತ್ತಿನ ಪಲ್ಲಕ್ಕಿ ಮೆರವಣಿಗೆ

ಶ್ರೀ ಡಾ. ಬಾಲಗಂಗಾಧರನಾಥ ಮಹಾಸ್ವಾಮೀಜಿ ಅವರ 13ನೇ ಪುಣ್ಯಾರಾಧನೆ ಅಂಗವಾಗಿ ನಗರದಲ್ಲಿ ಸಂಜೆ ಭಕ್ತಿ ಭಾವದ ಪುತ್ಥಳಿಯ ಮುತ್ತಿನ ಪಲ್ಲಕ್ಕಿ ಉತ್ಸವ ಹಾಗೂ ದಿವ್ಯ ಜ್ಯೋತಿಯೊಂದಿಗೆ ಮೆರವಣಿಗೆ ನಡೆಯಿತು.

ಹೇಮಾವತಿ ಪ್ರತಿಮೆಯಿಂದ ಹೊರಟ ಸ್ವಾಮೀಜಿಗಳು, ಜನಪ್ರತಿನಿಧಿಗಳು ಹಾಗೂ ಭಕ್ತರು ಹಳೆಯ ಬಸ್ ನಿಲ್ದಾಣ ರಸ್ತೆ, ಎನ್.ಆರ್.ವೃತ್ತ, ಜಿಲ್ಲಾಧಿಕಾರಿ ಕಚೇರಿ ಮುಂಭಾಗ, ಶಂಕರಮಠ ರಸ್ತೆ ಮಾರ್ಗವಾಗಿ ಆದಿಚುಂಚನಗಿರಿ ಸಮುದಾಯ ಭವನ ತಲುಪಿತು. ದಾರಿಯುದ್ದಕ್ಕೂ ಶ್ರೀಮಠದ ಭಕ್ತರು ನಾದಸ್ವರಗಳೊಂದಿಗೆ ಹೆಜ್ಜೆ ಹಾಕುತ್ತಾ ಭಕ್ತಿ ಮೆರೆದರು. ಸಂಜೆಯ ಮೆರವಣಿಗೆಗೆ ಮಳೆಯ ಸಿಂಚನ ಮೆರುಗು ನೀಡಿತು.

ಆದಿಚುಂಚನಗಿರಿ ಹಾಸನ ಶಾಖಾ ಮಠದ ಶ್ರೀ ಶಂಭುನಾಥ ಸ್ವಾಮೀಜಿ, ಶ್ರೀ ಶಿವಪುತ್ರನಾಥ ಸ್ವಾಮೀಜಿ, ಶಾಸಕರಾದ ಸಿ.ಎನ್.ಬಾಲಕೃಷ್ಣ, ಹೆಚ್.ಪಿ.ಸ್ವರೂಪ್, ರಾಜ್ಯ ಪತ್ರಕರ್ತರ ಸಂಘದ ಉಪಾಧ್ಯಕ್ಷ ಹೆಚ್.ಬಿ.ಮದನಗೌಡ, ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಜೆ.ಆರ್.ಕೆಂಚೇಗೌಡ, ಸುಮುಖ ರಘು, ನಾಯಕರಹಳ್ಳಿ ಮಂಜೇಗೌಡ, ಶಿವರಾಮೇಗೌಡ ಇತರರಿದ್ದರು.



# ಸ್ವಾಮಿ ವಿವೇಕಾನಂದರು ಯುವ ಪೀಳಿಗೆಗೆ ದಾರಿ ದೀಪ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ಸ್ವಾಮಿ ವಿವೇಕಾನಂದರು ನುಡಿದಂತೆ ನಡೆದ ಮಹಾನ್ ಚೇತನ, ಭಾರತದ ಸನಾತನ ಸಂಸ್ಕೃತಿಯನ್ನು ವಿಶ್ವಕ್ಕೆ ಪರಿಚಯಿಸಿದ ಅವರು ಯುವ ಪೀಳಿಗೆಗೆ ದಾರಿ ದೀಪವಾಗಿದ್ದಾರೆ ಎಂದು ಜಿಲ್ಲಾ ಪಂಚಾಯಿತಿ ಕಾರ್ಯದರ್ಶಿ ಬಾಬು ಹೇಳಿದರು.

ನಗರದ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಆಯುರ್ವೇದ ಮಹಾವಿದ್ಯಾಲಯದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಮೈ ಭಾರತ್, ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಆಯುರ್ವೇದ ಮಹಾವಿದ್ಯಾಲಯದಿಂದ ಸೋಮವಾರ ಸ್ವಾಮಿ ವಿವೇಕಾನಂದರ 163ನೇ ಜನ್ಮ ದಿನಾಚರಣೆಯ ಪ್ರಯುಕ್ತ ಹಮ್ಮಿಕೊಂಡಿದ್ದ ರಾಷ್ಟ್ರೀಯ ಯುವ ಸಪ್ತಾಹ ಉದ್ಘಾಟಿಸಿ ಮಾತನಾಡಿದರು.

ಸ್ವಾಮಿ ವಿವೇಕಾನಂದರ ಆದರ್ಶಗಳ ಜೊತೆಗೆ ಆಯುರ್ವೇದ ಮತ್ತು ಯೋಗದ ಮೂಲಕ ಆರೋಗ್ಯಕರ ಜೀವನ ಶೈಲಿ ಮತ್ತು ಸಾರ್ಥಕ ಜೀವನದ ಸಂದೇಶಗಳನ್ನು ಅರಿಯಬೇಕು.

ಗುರಿ ಮುಟ್ಟುವ ತನಕ ನಿಲ್ಲದಿರಿ ಎಂದು ಕರೆ ಕೊಟ್ಟವರು ಸ್ವಾಮಿ ವಿವೇಕಾನಂದ. ಯುವಕರಲ್ಲಿ ರಾಷ್ಟ್ರ ಕಟ್ಟುವಂತಹ ಶಕ್ತಿ ಇದೆ ಎಂದು ಮನವರಿಕೆ ಮಾಡಿಕೊಟ್ಟಿದ್ದಾರೆ ಎಂದರು.

ಪ್ರಪಂಚಕ್ಕೆ ಭಾರತೀಯ ಸಂಸ್ಕೃತಿ ಮತ್ತು ಧರ್ಮದ ಬಗ್ಗೆ ತಿಳಿಹೇಳುವ ಕಾರ್ಯ ಮಾಡಿದ್ದಾರೆ. ಆ ಕುರಿತು ಅನೇಕ ಪುಸ್ತಕಗಳನ್ನು ಬರೆದಿದ್ದಾರೆ. ಯುವ ಸಮಾಜ ಸ್ವಾಮಿ ವಿವೇಕಾನಂದ ಪುಸ್ತಕ ಅಧ್ಯಯನ ಮಾಡಬೇಕೆಂದು ಸಲಹೆ ನೀಡಿದರು.

ಖಜಾನೆ ಉಪನಿರ್ದೇಶಕ ಎ.ಜಿ.ವಿಜೇಂದ್ರ, ಮಾತನಾಡಿ, ಅರಿಸ್ಟಾಟಲ್ ಅವರಷ್ಟೇ ಸಮನಾದ ಗಣ್ಯವ್ಯಕ್ತಿ ಸ್ವಾಮಿ ವಿವೇಕಾನಂದರು. ಅವರು ಭಾರತದಲ್ಲಿದ್ದ ಕಂದಾಚಾರವನ್ನು ಹೋಗಲಾಡಿಸಲು ಹೋರಾಡಿದ್ದಾರೆ. ಸ್ವಾಮಿ ವಿವೇಕಾನಂದ ಅವರ ವೇಷಭೂಷಣ ತುಂಬಾ ಗಮನಾರ್ಹವಾದದ್ದು. ಪ್ರಪಂಚದ ಪಾಂಡಿತ್ಯದ ಜೊತೆಗೆ ಮಾತಿನ ಚಾತುರ್ಯತೆಯನ್ನು ಬಲ್ಲವರಾಗಿದ್ದರೆಂದರು.

ಎಸ್‌ಡಿಎಂ ಆಯುರ್ವೇದ ಮಹಾವಿದ್ಯಾಲಯದ ಪ್ರಾಂಶುಪಾಲೆ ಡಾ. ಯು.ಶೈಲಜಾ ಅಧ್ಯಕ್ಷತೆ ವಹಿಸಿ ಮಾತನಾಡಿ, ಕೇವಲ ಸ್ವಾಮಿ ವಿವೇಕಾನಂದರ ವಿಷಯ ಅರಿತರೆ ಸಾಲದು. ಅವರ ಸಂದೇಶಗಳು ನಮ್ಮ ಜೀವನದ ಅಳವಡಿಸಿಕೊಳ್ಳಬೇಕು. ವಿದ್ಯಾರ್ಥಿಗಳು ಸದೃಢ ದೇಹ, ನಿಶ್ಚಲ ಮನಸ್ಸು ಹಾಗು ಬೃಹತ್ ಹೊಂಗನಸುಗಳನ್ನು ಹೊತ್ತು ರಾಷ್ಟ್ರ ಪ್ರೇಮದ ಭಾವದಿಂದ ಮುನ್ನಡೆದರೆ ಸದೃಢ ಭಾರತ ವಿಶ್ವಗುರು ಎಂದು ಮತ್ತೊಮ್ಮೆ ಸಾಬೀತಾಗುವುದು ಎಂದರು.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಜಿ.ಡಿ. ಆನಂದಮೂರ್ತಿ ಮಾತನಾಡಿ, ಸ್ವಾಮಿ ವಿವೇಕಾನಂದರು ಭಾರತದ ಸಂಸ್ಕೃತಿಯನ್ನು ವಿಶ್ವದೆಲ್ಲೆಡೆ ಸಾರಿದ್ದಾರೆ. ಆಧ್ಯಾತ್ಮಿಕ ಜೀವನಕ್ಕೆ ಹೆಚ್ಚಿನ ಮನ್ನಣೆ ನೀಡುದ್ದಾರೆ. ರಾಮಕೃಷ್ಣ ಮಿಷನ್ ಪ್ರಾರಂಭಿಸಿ ದೇಶದ ಭಕ್ತಿಯನ್ನು ಹೆಚ್ಚಿಸಿದವರು ಎಂದರು.

ರಾಷ್ಟ್ರೀಯ ಯುವ ದಿನದ ಅಂಗವಾಗಿ ವಿದ್ಯಾರ್ಥಿಗಳಿಗೆ ನಡೆಸಿದ್ದ ಪ್ರಬಂಧ, ಭಾಷಣ ಮತ್ತು ಭಿತ್ತಿಪತ್ರ ರಚನೆ ಸ್ಪರ್ಧೆ ವಿಜೇತರಿಗೆ ಬಹುಮಾನ ವಿತರಿಸಲಾಯಿತು. ವೈದ್ಯಕೀಯ ವಿದ್ಯಾರ್ಥಿಗಳಿಂದ ಜಾಗೃತಿ ಜಾಥಾ ಹಮ್ಮಿಕೊಳ್ಳಲಾಗಿತ್ತು.

ಎಸ್‌ಡಿಎಂ ಆಯುರ್ವೇದ ಶಿಕ್ಷಣ ಸಂಸ್ಥೆಗಳ ನಿರ್ದೇಶಕ ಡಾ. ಪ್ರಸನ್ನ ನರಸಿಂಹರಾವ್, ಸುಬ್ಬಯ್ಯ ನಾಯ್ಡು, ಉಪ ಪ್ರಾಂಶುಪಾಲ ಡಾ.ಪ್ರಕಾಶ್ ಎಲ್. ಹೆಗಡೆ ಮತ್ತಿತರರಿದ್ದರು.

# ಪ್ರೋತ್ಸಾಹಧನ ಹೆಸರಲ್ಲಿ ರೈತರೊಂದಿಗೆ ಸರ್ಕಾರ ಚೆಲ್ಲಾಟ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ಬೆಳೆ ವ್ಯತ್ಯಾಸ ಪಾವತಿ ಯೋಜನೆಯಡಿ ಪ್ರತಿ ಕ್ವಿಂಟಾಲ್ ಮೆಕ್ಕೆ ಜೋಳಕ್ಕೆ 250 ರೂ. ಪ್ರೋತ್ಸಾಹಧನ ನೀಡುವುದಾಗಿ ಸರ್ಕಾರ ಘೋಷಿಸಿದೆಯಾದರೂ ಅದರ ಸಂಪೂರ್ಣ ಲಾಭ ಮಧ್ಯವರ್ತಿಗಳ ಪಾಲಾಗುತ್ತಿದೆ. ಸರ್ಕಾರ ರೈತರ ಜೀವನದೊಂದಿಗೆ ಚೆಲ್ಲಾಟವಾಡುತ್ತಿದೆಯೆಂದು ರೈತ ಸಂಘ ಹಾಗು ಹಸಿರು ಸೇನೆ ಜಿಲ್ಲಾಧ್ಯಕ್ಷ ಕಣಗಾಲ್ ಮೂರ್ತಿ ಆಕ್ರೋಶ ವ್ಯಕ್ತಪಡಿಸಿದರು. ಸುದ್ದಿಗೋಷ್ಠಿಯಲ್ಲಿ ಸೋಮವಾರ ಮಾತನಾಡಿ, ಎಪಿಎಂಸಿಯಲ್ಲಿ ಮೆಕ್ಕೆಜೋಳ ಮಾರಾಟ ಮಾಡಿದರೆ ಪ್ರತಿ ಕ್ವಿಂಟಾಲ್‌ಗೆ 250 ರೂ. ನೀಡುವುದಾಗಿ ಸರ್ಕಾರ ಹೇಳಿತ್ತು. ಅದರಂತೆ ರೈತರು ಮಾರುಕಟ್ಟೆಗೆ ಹೋದರೆ 1,600-1,700 ರೂ.ಗೆ ಕೇಳುತ್ತಿದ್ದಾರೆ. ಮಾರುಕಟ್ಟೆಯಲ್ಲಿ 1,900 ರೂ. ಇದ್ದರೆ ಸರ್ಕಾರ ನೀಡುವ 250 ರೂ. ಸೇರಿ 2,150 ರೂ. ದೊರೆಯುತ್ತಿತ್ತು. ಆದರೆ ಮಾರುಕಟ್ಟೆ ಬೆಲೆ ಕುಸಿದಿದೆ ಎಂದರು.

ಕೇಂದ್ರ-ರಾಜ್ಯ ಸರ್ಕಾರಗಳು ಹೀಗೆ ರೈತರಿಗೆ ಭರವಸೆ ನೀಡಿ ಮೋಸ ಮಾಡುವ ಬದಲು, ಜಿಲ್ಲೆಯಲ್ಲಿ ಎಷ್ಟು ರೈತರು ಮೆಕ್ಕೆಜೋಳ ಬೆಳೆದಿದ್ದಾರೆ ಎಂಬ ಬಗ್ಗೆ ಕೃಷಿ ಮತ್ತು ಕಂದಾಯ ಇಲಾಖೆಯಲ್ಲಿ ಮಾಹಿತಿಯಿದೆ. ಅದರ ಅನ್ವಯ ನೇರವಾಗಿ ರೈತರ ಖಾತೆಗೆ ಪ್ರೋತ್ಸಾಹಧನ ಪಾವತಿ ಮಾಡಬೇಕೆಂದು ಆಗ್ರಹಿಸಿದರು.

ತಾಲ್ಲೂಕು ಅಧ್ಯಕ್ಷ ಮಂಜುನಾಥ್ ಮಾತನಾಡಿ, ರೈತರು ಆರಂಭದಿಂದ ಕೊನೆವರೆಗೂ ಹೋರಾಟ ಮಾಡುತ್ತಲೇ ನ್ಯಾಯ ಪಡೆಯುವಂತಾಗಿದೆ. ಆಳುವ ಸರ್ಕಾರ ಕೇವಲ ಕಣ್ಣೊರೆಸುವ ನಾಟಕದ ಬದಲು ನೆರವಿಗೆ ಬರಬೇಕೆಂದು ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ರೈತ ಮುಖಂಡರಾದ ಗಂಗಾಧರಪ್ಪ, ಪರಮೇಶ್, ಪ್ರಕಾಶ್, ರಾಜಣ್ಣ, ಲಕ್ಷ್ಮಣ ಇದ್ದರು.

# ಕಾಂಗ್ರೆಸ್‌ನಿಂದ ಆಡಳಿತ ಯಂತ್ರ ದುರುಪಯೋಗ: ಹೆಚ್.ಡಿ.ರೇವಣ್ಣ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹೊಳೆನರಸೀಪುರ: ಆಡಳಿತ ಯಂತ್ರವನ್ನು ದುರ್ಬಳಕೆ ಮಾಡಿಕೊಂಡು ಜಿಲ್ಲೆಯಲ್ಲಿ 2 ಬಾರಿ ಕಾಂಗ್ರೆಸ್ ಸಮಾವೇಶ ನಡೆಸಿದ್ದೀರಿ. ಅದಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣ ಬೈರೇಗೌಡ ಉತ್ತರಿಸಬೇಕು ಎಂದು ಶಾಸಕ ಎಚ್.ಡಿ.ರೇವಣ್ಣ ಪ್ರಶ್ನಿಸಿದ್ದಾರೆ.

ಹಾಸನದಲ್ಲಿ ಜ.24 ರಂದು ನಡೆಯಲಿರುವ ಜೆಡಿಎಸ್ ಸಮಾವೇಶದ ಹಿನ್ನೆಲೆಯಲ್ಲಿ ಪಟ್ಟಣದ ಚನ್ನಾಂಬಿಕ ಕನ್ವೆಷನಲ್ ಹಾಲ್‌ನಲ್ಲಿ ಸೋಮವಾರ ಕಾರ್ಯಕರ್ತರ ಪೂರ್ವಭಾವಿ ಸಭೆಯಲ್ಲಿ ಮಾತನಾಡಿ, ಜಿಲ್ಲೆಯ ಅಧಿಕಾರಿಗಳನ್ನು ಬಳಸಿಕೊಂಡು ಅಂಗನವಾಡಿ, ಆಶಾ ಕಾರ್ಯಕರ್ತೆಯರನ್ನು ಸಮಾವೇಶಕ್ಕೆ ಕರೆ ತಂದಿದ್ದೀರಿ. ಕಾರ್ಯಕರ್ತರ ಹೆಸರಿನಲ್ಲಿ ಜನರನ್ನು ಸಮಾವೇಶಕ್ಕೆ ಕರೆತರಲು ಸಾವಿರಾರು ಕೋಟಿ ರೂ. ಹಣ ಕಟ್ಟಿದ್ದೀರಿ. ತೆರಿಗೆ ರೂಪದ ಹಣ ನಿಮ್ಮ ಸಮಾವೇಶಕ್ಕೆ ಬಳಕೆ ಮಾಡಲಾಗಿದೆ. ಬಗರ್ ಹುಕುಂ ಯೋಜನೆಯಡಿ ರೈತ ಆಕಾಂಕ್ಷಿತರು ಹಾಕಿದ್ದ ಅರ್ಜಿ ವಜಾ ಮಾಡಿದ್ದೀರಿ. ಎಷ್ಟು ಜನರ ಯಾವ ಕಾರಣಕ್ಕಾಗಿ ರೈತರ ಅರ್ಜಿ ವಜಾ ಮಾಡಲಾಗಿದೆ ಎಂಬುದಕ್ಕೆ ಉತ್ತರಿಸಬೇಕಿದೆ. ದೇಶದ ಪ್ರಧಾನಿ ನರೇಂದ್ರ ಮೋದಿ ಮತ್ತು ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರ ನಡುವೆ ಉತ್ತಮ ಬಾಂಧವ್ಯ ಇದೆ. ಕೇಂದ್ರ ಸಚಿವರಾಗಿ ಎಚ್.ಡಿ.ಕುಮಾರಸ್ವಾಮಿ ಸಹ ಸಹಕರಿಸಿದ್ದಾರೆ. ದುದ್ದ ಶಾಂತಿಗ್ರಾಮ, ದಂಡಿಗನಹಳ್ಳಿ, ಹಳ್ಳಿಮೈಸೂರು, ಹಳೆಕೋಟೆ ಹೋಬಳಿಗಳಲ್ಲಿ ದೇವಾಲಯ ಕಟ್ಟಿಸಿದ್ದೇವೆ. ನೀರಾವರಿ ಅನುಕೂಲತೆ ಮಾಡಿದ್ದೇವೆ. ಮುಂದೆ ಖುದ್ದು ಹಳ್ಳಿಗಳಿಗೆ ಭೇಟಿ ನೀಡಿ ಉಳಿಕೆ ಅಭಿವೃದ್ಧಿ ಕಾರ್ಯ ಮಾಡಲಿದ್ದೇನೆ. ಪಟ್ಟಣದ 23 ವಾರ್ಡ್‌ಗಳ ಸರ್ವಾಂಗೀಣ ಅನುಕೂಲತೆ ಮಾಡಲಿದ್ದೇವೆ. ನಾನು ಯಾವುದಕ್ಕೂ ಹೆದರುವುದಿಲ್ಲ. ಕಳೆದ 40 ವರ್ಷದಿಂದ ರಾಜಕೀಯದಲ್ಲಿ ಇದ್ದೇನೆ. ನಾನೇನು ಮಾಡಬೇಕೆಂದು ನನಗೆ ಗೊತ್ತಿದೆ. ನಮ್ಮ ಕಾರ್ಯಕರ್ತರು ಹೆದರುವ ಅವಶ್ಯಕತೆ ಇಲ್ಲ. ಇಷ್ಟಲ್ಲದೆ ಜಿಲ್ಲೆಗೆ ಕಾಂಗ್ರೆಸ್‌ನ ಕೊಡುಗೆ ಏನು ಎಂಬುದನ್ನೂ ಉತ್ತರಿಸಬೇಕಿದೆ ಎಂದರು.

ಅರಕಲಗೂಡು ಶಾಸಕ ಎ.ಮಂಜು ಮಾತನಾಡಿ, ನಮ್ಮ ಕ್ಷೇತ್ರದಿಂದ ಹೆಚ್ಚಿನ ಕಾರ್ಯಕರ್ತರು ಜೆಡಿಎಸ್ ಸಮಾವೇಶದಲ್ಲಿ ಪಾಲ್ಗೊಳ್ಳಲಿದ್ದಾರೆ. ಪಕ್ಷದ ವರಿಷ್ಠರು ಸಮಾವೇಶದಲ್ಲಿ ಪಾಲ್ಗೊಳ್ಳುವುದರಿಂದ ಪಕ್ಷಕ್ಕೆ ಆನೆಬಲ ಬಂದಂತಾಗುತ್ತದೆ ಎಂದರು.

ಜೆಡಿಎಸ್ ತಾಲೂಕು ಅಧ್ಯಕ್ಷ ಎಚ್.ಎಸ್.ಪುಟ್ಟಸ್ವಾಮಪ್ಪ, ಉದ್ಯಮಿ ಆಲಗೌಡನಹಳ್ಳಿ ಸೋಮಶೇಖರ್, ಗುತ್ತಿಗೆದಾರ ಟಿ.ಶಿವಕುಮಾರ್, ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಜವರೇಗೌಡ, ವಕೀಲರಾದ ಪೂರ್ಣಚಂದ್ರ ಮತ್ತು ರಾಜಶೇಖರ್ ಇತರರು ಉಪಸ್ಥಿತರಿದ್ದರು.

# ರಾಮನಾಥಪುರ: ಕಾವೇರಿ ನದಿಯಲ್ಲಿ ಹೆಚ್ಚಿದ ಅನೈರ್ಮಲ್ಯ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಅರಕಲಗೂಡು: ತಾಲ್ಲೂಕಿನ ರಾಮನಾಥಪುರದ ಪುರಾಣ ಪ್ರಸಿದ್ಧ ದೇವಸ್ಥಾನಗಳಿಗೆ ಬರುವ ಭಕ್ತರು ಕಾವೇರಿ ನದಿಗೆ ಅನಗತ್ಯ ತ್ಯಾಜ್ಯ ಎಸೆಯುತ್ತಿರುವ ಪರಿಣಾಮ ನೀರು ಮಲಿನಗೊಂಡಿದ್ದು ಜಲಚರ ಪ್ರಾಣಿಗಳಿಗೆ ಕುತ್ತು ಉಂಟಾಗಿದೆ.

ಕಳೆದ ನವೆಂಬರ್ ಮತ್ತು ಡಿಸೆಂಬರ್ ತಿಂಗಳಲ್ಲಿ ಸುಬ್ರಹ್ಮಣ್ಯಸ್ವಾಮಿ ರಥೋತ್ಸವ ನಡೆದಿದೆ. ಈ ಎರಡು ತಿಂಗಳ ಅವಧಿಯಲ್ಲಿ ಲಕ್ಷಕ್ಕೂ ಅಧಿಕ ಸಂಖ್ಯೆಯ ಭಕ್ತರು ದೇವಾಲಯಗಳ ದರ್ಶನ ಹಾಗೂ ಕಾವೇರಿ ನದಿಯಲ್ಲಿ ಪುಣ್ಯ ಸ್ನಾನ ಮಾಡಿ ಪುನೀತರಾಗಿದ್ದಾರೆ. ಆದರೆ ನದಿಯಲ್ಲಿ ಸ್ನಾನ ಮಾಡಿದ ಬಟ್ಟೆಗಳು, ಪೂಜೆ ಮಾಡಿದ ಅನುಪಯುಕ್ತ ಪರಿಕರ, ತ್ಯಾಜ್ಯಗಳನ್ನು ನದಿ ಮತ್ತು ದಡದಲ್ಲಿ ಬಿಸಾಡಿ ಹೋಗಿರುವುದು ಕಂಡುಬಂದಿದೆ. ಈ ತ್ಯಾಜ್ಯವನ್ನು ನೀರಿನಲ್ಲಿ ಹಾಕಿರುವ ಕಾರಣ ನೀರು ಮಲೀನಗೊಳ್ಳುವ ಜೊತೆಗೆ ಪರಿಸರಕ್ಕೆ ಮಾರಕವಾಗಿ ಪರಿಣಮಿಸಿದೆ.

ರಾಮನಾಥಪುರದಲ್ಲಿ ಪೂರ್ವಕ್ಕೆ ಅಭಿಮುಖವಾಗಿ ಕಾವೇರಿ ನದಿ ವರ್ಷವಿಡೀ ಹರಿಯುತ್ತಾ ರೈತರ ಕೃಷಿ ಜಮೀನಿಗೆ ನೀರು, ಜನ ಜಾನುವಾರುಗಳಿಗೆ ಕುಡಿಯುವ ನೀರು ಒದಗಿಸುತ್ತದೆ. ನದಿಯ ಮಧ್ಯದಲ್ಲಿ ಪುರಾಣ ಪ್ರಸಿದ್ಧ ಗಾಯತ್ರಿ ಶಿಲೆ, ಗೋಗರ್ಭ- ಕುಮಾರಧಾರ ಪೂಜಾ ಕೇಂದ್ರಗಳು ಇವೆ.

ನದಿಯಲ್ಲಿ ನೀರಿನ ಹರಿಯುವಿಕೆ ಕಡಿಮೆಯಾದಾಗ ಈ ಮೂರು ಕೇಂದ್ರಗಳ ದರ್ಶನಕ್ಕೆ ಅಪಾರ ಸಂಖ್ಯೆಯಲ್ಲಿ ಮಹಿಳೆಯರು, ಮಕ್ಕಳು, ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ನದಿಯಲ್ಲಿ ಮುಳುಗಿ ಪೂಜೆ ಸಲ್ಲಿಸಿ ಭಕ್ತಿಭಾವ ಮೆರೆಯುತ್ತಾರೆ. ಪ್ರಮುಖವಾಗಿ ಪುಣ್ಯ ಸ್ನಾನ ಮಾಡಿ ಹೊಸ ಮಡಿ ಬಟ್ಟೆ ತೊಡುವುದು ವಾಡಿಕೆಯಾಗಿರುವ ಹಿನ್ನಲೆ ಸ್ನಾನ ಮಾಡಿ ಉಟ್ಟ ಬಟ್ಟೆಗಳನ್ನು ನದಿಯಲ್ಲಿಯಲ್ಲಿಯೆ ಬಿಟ್ಟು ಹೋಗುತ್ತಾರೆ. ಇದು ನೇರವಾಗಿ ನೀರು ಮಲೀನಕ್ಕೆ ಕಾರಣವಾಗುತ್ತಿದೆ. ಇದಲ್ಲದೇ ನದಿ ದಡದಲ್ಲಿ ಪ್ರಸನ್ನ ಶ್ರೀ ಸುಬ್ರಮಣ್ಯಸ್ವಾಮಿ, ಅಗಸ್ತೇಶ್ವರಸ್ವಾಮಿ, ಪಟ್ಟಾಭೀರಾಮ, ವರದಾನ ಬಸವೇಶ್ವರ, ರಾಮೇಶ್ವರಸ್ವಾಮಿ, ಲಕ್ಷ್ಮಣೇಶ್ವರ ಮುಂತಾದ ದೇವಾಲಯಗಳು ಇದ್ದು, ಇಲ್ಲಿನ ದೇವರ ದರ್ಶನ ಪಡೆದ ಬಳಿಕ ಭಕ್ತರು ನದಿಗೆ ಇಳಿಯುತ್ತಾರೆ. ದೇವರಿಗೆ ನೈವೇದ್ಯ ಮಾಡಿದ ಪೂಜಾ ಪರಿಕರಗಳನ್ನು ನದಿ ಮತ್ತು ದಂಡೆಯಲ್ಲಿ ಹಾಕುತ್ತಾರೆ. ಅವುಗಳು ಗಾಳಿಯಿಂದ ನೇರವಾಗಿ ನದಿ ಸೇರುತ್ತವೆ. ಅಲ್ಲದೆ ಗ್ರಾಮೀಣ ಪ್ರದೇಶದಿಂದ ಬರುವ ಭಕ್ತರು ಬಟ್ಟೆ ಮತ್ತು ದೇವರು ತಂದವರು ಭಕ್ತರು ಬಾಳೆಕಂದು ಮಾವಿನ ಸೊಪ್ಪು, ಬಟ್ಟೆ ಮುಂತಾದ ತ್ಯಾಜ್ಯಗಳನ್ನು ನದಿಯಲ್ಲಿ ಬಿಸಾಡುತ್ತಿರುವುದು ಸರ್ವೆ ಸಾಮಾನ್ಯವಾಗಿದೆ.

### ರಕ್ಷಣಾ ವ್ಯವಸ್ಥೆ ಕೈಗೊಳ್ಳಿ

ಪ್ರಮುಖವಾಗಿ ಸುಬ್ರಹ್ಮಣ್ಯಸ್ವಾಮಿ ದೇವಾಲಯಕ್ಕೆ ಬರುವ ಭಕ್ತರ ಸಂಖ್ಯೆ ಅಪಾರ. ಅದೇ ರೀತಿ ರಾಮೇಶ್ವರ ದೇವಾಲಯ, ವಹ್ನಿ ಪುಷ್ಕರಣಿ ದರ್ಶನ, ವೀಕ್ಷಣೆಗೆ ನಿತ್ಯವೂ ನೂರಾರು ಜನರು ಬಂದು ಹೋಗುತ್ತಾರೆ. ಈ ಎರಡು ಕಡೆ ರಕ್ಷಣಾ ಕ್ರಮ ವಹಿಸಿದರೆ ತ್ಯಾಜ್ಯ ಹಾಕುವುದನ್ನು ತಡೆಗಟ್ಟಬಹುದಾಗಿದೆ. ಅಯ್ಯಪ್ಪ ಸ್ವಾಮಿಗೆ ತೆರಳುವ ಭಕ್ತರು ಮತ್ತು ಹಿಂದಿರುಗುವ ಭಕ್ತರು ಕಾವೇರಿ ನದಿಗೆ ಇಳಿದು ಸ್ನಾನ ಮಾಡಿ ಮಾಲೆ ತೆಗೆಯುತ್ತಾರೆ. ಈ ವೇಳೆ ಬಹುತೇಕ ಭಕ್ತರು ಬಟ್ಟೆಗಳನ್ನು ಬಿಸಾಡುತ್ತಿದ್ದು ಅದಕ್ಕೆ ಕಡಿವಾಣ ಹಾಕಬೇಕಿದೆ.

# ನವೋದಯ ವಿದ್ಯಾಸಂಸ್ಥೆ ಸದಸ್ಯತ್ವ ಶುಲ್ಕ ಹೆಚ್ಚಳ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ನವೋದಯ ವಿದ್ಯಾ ಸಂಘದ ಸದಸ್ಯತ್ವ ನವೀಕರಣ ಶುಲ್ಕವನ್ನು 1,000 ರೂ.ಗೆ ಹೆಚ್ಚಿಸಿದ್ದು, ಸರ್ವ ಸದಸ್ಯರು ಈ ಹಣವನ್ನು ನಿಗದಿತ ದಿನಾಂಕದ ಒಳಗೆ ಪಾವತಿಸುವಂತೆ ನವೋದಯ ವಿದ್ಯಾ ಸಂಸ್ಥೆಯ ಅಧ್ಯಕ್ಷ ಮಂಜುನಾಥ್ ತಿಳಿಸಿದ್ದಾರೆ.

ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು, ನವೋದಯ ವಿದ್ಯಾ ಸಂಘದ ಸದಸ್ಯತ್ವ ನವೀಕರಣದ ಸಲುವಾಗಿ ಕಳೆದ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯಲ್ಲಿ ಒಂದು ಸಾವಿರ ರೂಪಾಯಿ ಹೆಚ್ಚುವರಿ ಹಣವನ್ನು ಸಂದಾಯ ಮಾಡಬೇಕು. ಎರಡು ಪಾಸ್ ಪೋರ್ಟ್ ಅಳತೆಯ ಫೋಟೋ ನೀಡಿ ನವೀಕರಿಸಬೇಕು. ಒಟ್ಟು 2,583 ಸದಸ್ಯರನ್ನು ಒಳಗೊಂಡಂತೆ ನವೋದಯ ವಿದ್ಯಾ ಸಂಸ್ಥೆಯು ಸದಸ್ಯರನ್ನು ಹೊಂದಿದೆ. ಈ ಪ್ರತಿಯೊಬ್ಬ ಸದಸ್ಯರು ಕೂಡ ದಯಮಾಡಿ ಈ ಮೇಲ್ಕಂಡ ಹಣವನ್ನು ಪಾವತಿಸಬೇಕು. ಒಂದು ವೇಳೆ ಹಣವನ್ನು ಪಾವತಿಸದೆ ಇದ್ದಲ್ಲಿ ಅಂತವರ ಸದಸ್ಯತ್ವ ರದ್ದುಗೊಳ್ಳುತ್ತದೆ. ತಮ್ಮ ಸದಸ್ಯತ್ವಕ್ಕಾಗಿ ಈ ಹಿಂದೆ ಸಂಘದ ಸರ್ವ ಸದಸ್ಯತ್ವ ಹಣವನ್ನು ಪಾವತಿ ಮಾಡಿದ್ದೀರಾ ಆದರೆ ಸಂಸ್ಥೆಯ ಏಳಿಗೆಗಾಗಿ ಹಾಗೂ ಕ್ಷೇಮಾಭಿವೃದ್ಧಿಗಾಗಿ ಸಂಘದ ಸದಸ್ಯತ್ವವನ್ನು ಹೆಚ್ಚಿಸುವ ನಿರ್ಣಯವನ್ನು ಸರ್ವ ಸದಸ್ಯರು ಒಪ್ಪಿರುವ ಹಿನ್ನೆಲೆ ಈ ಒಪ್ಪಿಗೆ ಅನುಗುಣವಾಗಿ ಎಲ್ಲಾ ಸದಸ್ಯರುಗಳು ಸಹಕರಿಸುವಂತೆ ಕೋರುತ್ತಿದ್ದೇವೆ. ತಾಲೂಕಿನಲ್ಲಿ ವಾರ್ಷಿಕ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ತರುವ ಸಲುವಾಗಿ ಈಗಾಗಲೇ ಮಕ್ಕಳಿಗೆ ಉತ್ತಮ ವಿದ್ಯಾಭ್ಯಾಸ ನೀಡುವಲ್ಲಿ ವಿದ್ಯಾಸಂಸ್ಥೆಯ ಎಲ್ಲಾ ಪದಾಧಿಕಾರಿಗಳು ಮತ್ತು ಶಿಕ್ಷಕ ವೃಂದದವರು ಬಹಳಷ್ಟು ಶ್ರಮವಹಿಸುತ್ತಿದ್ದಾರೆ. ಈ ಶ್ರಮಕ್ಕೆ ಪೋಷಕರ ಸಹಕಾರವು ಪ್ರಮುಖವಾಗಿದೆ ಹಾಗೂ ಪೂರ್ವ ಪ್ರಾಥಮಿಕ ಶಾಲೆಯನ್ನು 2026-27ನೇ ಶೈಕ್ಷಣಿಕ ಸಾಲಿನಲ್ಲಿ ತೆರೆಯಲು ಮುಂದಾಗಿದ್ದೇವೆ. ಆದ್ದರಿಂದ ಸಾರ್ವಜನಿಕರು ತಮ್ಮ ಮಕ್ಕಳನ್ನು ಈ ವಿದ್ಯಾಸಂಸ್ಥೆಗೆ ಸೇರಿಸುವ ಮೂಲಕ ಈ ವಿದ್ಯಾಸಂಸ್ಥೆಯನ್ನು ಇನ್ನು ಹೆಚ್ಚಿನ ಬಲವರ್ಧನೆಗೆ ಪ್ರೋತ್ಸಾಹಿಸಬೇಕು ಎಂದರು.

ನವೋದಯ ವಿದ್ಯಾ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಶರತ್‌ಕೆಂಬಾಳು, ಗೌರವಾಧ್ಯಕ್ಷ ಶೇಷಶಯನ, ಸಹಕಾರ್ಯದರ್ಶಿ ಸಂತೋಷ್ ಮರುವನಹಳ್ಳಿ, ಕಾರ್ಯಕಾರಿ ಮಂಡಳಿಯ ಸದಸ್ಯರುಗಳಾದ ಆನಂದ್‌ಕಾಳೇನಹಳ್ಳಿ, ಗಿರೀಶ್ ಗನ್ನಿ, ಆದರ್ಶ್ ಹಾಜರಿದ್ದರು.

# ಭೀಮಾ ಕೋರೆಗಾಂವ್ ಅಂಗವಾಗಿ ಇಂದು ಬೈಕ್ ರ‍್ಯಾಲಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದಲ್ಲಿ ಇದೇ ಮೊದಲ ಬಾರಿಗೆ ಜ. 20ರಂದು ಹಮ್ಮಿಕೊಂಡಿರುವ ಭೀಮಾ ಕೋರೆಂಗಾವ್ ವಿಜಯೋತ್ಸವ ಅಂಗವಾಗಿ ಜ. 14 ರಂದು ನಗರದಲ್ಲಿ ಬೈಕ್ ರ‍್ಯಾಲಿ ಹಮ್ಮಿಕೊಳ್ಳಲಾಗಿದೆ ಎಂದು ಆಚರಣಾ ಸಮಿತಿ ಅಧ್ಯಕ್ಷ ಹೆಚ್.ಕೆ.ಸಂದೇಶ್ ತಿಳಿಸಿದರು.

ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಜ.14 ರಂದು ಬೆಳಿಗ್ಗೆ ಅಂಬೇಡ್ಕರ್ ಪ್ರತಿಮೆ ಬಳಿಯಿಂದ ಬೈಕ್ ರ‍್ಯಾಲಿ ಹೊರಡಲಿದ್ದು, ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ರ‍್ಯಾಲಿಗೆ ಚಾಲನೆ ನೀಡಲಿದ್ದಾರೆ. ಭೀಮಾ ಕೋರೆಂಗಾವ್ ವಿಜಯೋತ್ಸವಕ್ಕೆ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರ ಮೊಮ್ಮಗ ಭೀಮ್‌ರಾವ್ ಅಂಬೇಡ್ಕರ್ ಅವರು ಆಗಮಿಸಲಿರುವ ಹಿನ್ನಲೆ ಸಮುದಾಯದ ಜನರಲ್ಲಿ ಸಾಮಾಜಿಕ ಜಾಗೃತಿ ಮೂಡಿಸುವ ಉದ್ದೇಶದಿಂದ ಬೈಕ್ ರ‍್ಯಾಲಿ ಆಯೋಜಿಸಲಾಗಿದೆ ಎಂದು ತಿಳಿಸಿದರು.

ಆರಂಭವಾದ ಸ್ಥಳದಲ್ಲೇ ಬೈಕ್ ರ‍್ಯಾಲಿ ಕೊನೆಯಾಗಲಿದ್ದು, ಸಮುದಾಯದ ಮುಖಂಡರು, ಯುವಕರು ಹಾಗೂ ಯುವತಿಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು. ಎಲ್ಲಾ ಬೈಕ್ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಿ ಬೆಳಿಗ್ಗೆಯೇ ಆಗಮಿಸಬೇಕು. ಮುಖ್ಯವಾಗಿ ರ‍್ಯಾಲಿ ವೇಳೆ ಸಾರ್ವಜನಿಕರಿಗೆ ತೊಂದರೆ ಆಗದ ರೀತಿಯಲ್ಲಿ ಶಿಸ್ತುಬದ್ಧವಾಗಿ ನಡೆದುಕೊಳ್ಳೋಣ ಎಂದು ವಿನಂತಿಸಿದರು.

ದಲಿತ ಮುಖಂಡರಾದ ಮಣಿಕಂಠ, ಗುಡ್ಡೇನಹಳ್ಳಿ ರಂಗಸ್ವಾಮಿ, ಚೌಡಹಳ್ಳಿ ಜಗದೀಶ್, ಗೋವಿಂದರಾಜು, ಹರೀಶ್ ಉಳುವಾರೆ ಇದ್ದರು.

# ಬಗರ್ ಹುಕುಂ ಸಾಗುವಳಿದಾರರಿಗೆ ಶೀಘ್ರ ನಿವೇಶನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಅರಸೀಕೆರೆ: ಬಗರ್ ಹುಕುಂ ಕೃಷಿ ಭೂಮಿಯಲ್ಲಿ ಸಾಗುವಳಿ ಮಾಡುತ್ತಿರುವ ರೈತರಿಗೆ ಕಾಯಂ ಹಕ್ಕು ಪತ್ರವನ್ನು ಶೀಘ್ರದಲ್ಲಿ ವಿತರಿಸಲಾಗುವುದು ಎಂದು ರಾಜ್ಯ ಗೃಹ ನಿರ್ಮಾಣ ಮಂಡಳಿ ಅಧ್ಯಕ್ಷ ಕೆ.ಎಂ. ಶಿವಲಿಂಗೇಗೌಡ ಹೇಳಿದರು.

ಕಾಮಸಮುದ್ರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಜನ ಸಂಪರ್ಕ ಸಭೆ ಹಾಗೂ ವಿವಿಧ ಅಭಿವೃದ್ಧಿ ಕಾಮಗಾರಿ ಭೂಮಿಪೂಜೆ ನೆರವೇರಿಸಿ ಮಾತನಾಡಿ, ದಶಕಗಳ ಕಾಲದಿಂದ ಸರ್ಕಾರದ ಭೂಮಿಯಲ್ಲಿ ಕೃಷಿ ಮಾಡುತ್ತಾ ಬದುಕು ಸಾಗಿಸುತ್ತಾ ಬಂದಿರುವ ರೈತರಿಗೆ ಹಕ್ಕುಪತ್ರ ವಿತರಿಸುವ ನಿಟ್ಟಿನಲ್ಲಿ ಸರ್ಕಾರ ಮುಂದಾಗಿದೆ. ಈ ಸಂಬಂಧ ಕಂದಾಯ ಇಲಾಖೆಯ ಸಚಿವ ಕೃಷ್ಣಬೈರೇಗೌಡ ವಿಶೇಷ ಆಸಕ್ತಿ ವಹಿಸಿದ್ದು ಸಾಫ್ಟವೇರ್ ಅಭಿವೃದ್ಧಿಪಡಿಸಲಾಗುತ್ತದೆ. ಶೀಘ್ರದಲ್ಲೇ ಬಗರ್ ಹುಕುಂ ಸಾಗುವಳಿ ರೈತರಿಗೆ ಹಕ್ಕುಪತ್ರ ಸಿಗಲಿದೆ ಎಂದು ಅಭಯ ನೀಡಿದರು.

ಈಗಾಗಲೇ ತಾಲೂಕಿನ ಫಲಾನುಭವಿಗಳ ಪಟ್ಟಿ ಕೂಡ ಸಿದ್ಧವಾಗಿದ್ದು ತಮ್ಮ ಗ್ರಾಮಗಳಿಗೆ ನಾನೇ ಭೇಟಿ ನೀಡಿ ನಿಮಗೆ ಹಕ್ಕುಪತ್ರ ನೀಡುವುದಾಗಿ ಘೋಷಿಸಿದರು.

ತಾಲೂಕು ದಂಡಾಧಿಕಾರಿ ಸಂತೋಷ್ ಕುಮಾರ್ ಮಾತನಾಡಿ, ಕಳೆದ 15 ದಿನಗಳಿಂದ ತಾಲೂಕಿನಲ್ಲಿ ನಡೆಯುತ್ತಿರುವ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಜನ ಸಂಪರ್ಕ ಸಭೆಯು ಗ್ರಾಮೀಣ ಭಾಗದ ಜನತೆಯ ಸಮಸ್ಯೆ ಆಲಿಸುವ ಜೊತೆಗೆ ಅವರ ಅನೇಕ ಸಮಸ್ಯೆಗಳಿಗೆ ಪರಿಹಾರ ಜನ ಸಂಪರ್ಕ ಸಭೆಯ ಮೂಲಕ ದೊರೆಯುತ್ತಿರುವುದು ಸಂತಸದ ವಿಷಯವಾಗಿದೆ ಎಂದರು. ಸ್ಥಳೀಯ ಸಮಸ್ಯೆಗಳು ಸೇರಿದಂತೆ ಕುಡಿಯುವ ನೀರು ಪ್ರಾಣಿಯಲ್ಲಿಂದ ಲೋಪ ದೋಷ ಸಾಮಾಜಿಕ ಭದ್ರತಾ ಯೋಜನೆಗಳ ಫಲಾನುಭವಿಗಳು ತಮ್ಮ ಮಾಸಿಕ ಅನುದಾನ ಪಡೆಯಲು ಆಗುತ್ತಿದ್ದ ವಿಳಂಬಕ್ಕೆ ಕಾರಣ ಹೀಗೆ ಹಲವು ಸಮಸ್ಯೆಗಳಿಗೆ ಜನಸಂಪರ್ಕ ಸಭೆಯಲ್ಲಿ ಪರಿಹಾರ ದೊರೆತಿದೆ ಎಂದು ಹೇಳಿದರು.

ಸಭೆಯಲ್ಲಿ ಗ್ರಾಪಂ ಅಧ್ಯಕ್ಷೆ ರೇಖಾ ಆರಾಧ್ಯ, ಗ್ರಾಮೀಣ ಕುಡಿಯುವ ನೀರು ಸರಬರಾಜು ಅಧೀಕ್ಷಕ ಇಂಜಿನಿಯರ್, ವೀರಪ್ಪ, ಕಾರ್ಯಪಾಲಕ ಇಂಜಿನಿಯರ್ ನವ್ಯಶ್ರೀ, ಗ್ರಾಮೀಣ ವೃತ್ತ ಪೊಲೀಸ್ ನಿರೀಕ್ಷಕ ಅರುಣ್ ಕುಮಾರ್, ಮುಖಂಡರಾದ ಪಡುವನಹಳ್ಳಿ ಶಿವಣ್ಣ, ರಾಜಶೇಖರ, ತುಂಬಾಪುರ ನವೀನ್, ಕಾಮಸಮುದ್ರ ರವಿ, ರೇಣುಕಪ್ಪ, ಮಹಾಲಿಂಗಪ್ಪ, ಯರಿಗೇನಹಳ್ಳಿ ಸಿದ್ದಪ್ಪ, ನಾನಾನಾಯ್ಕ ಇತರರಿದ್ದರು.

# ಇತಿಹಾಸದಲ್ಲಿ ಈ ದಿನ

## ಜನವರಿ-14

ಮಕರ ಸಂಕ್ರಾಂತಿ: ಸೂರ್ಯನು ಮಕರ ರಾಶಿಗೆ ಪ್ರವೇಶಿಸುವ ಪವಿತ್ರ ದಿನ. ಭಾರತದೆಲ್ಲೆಡೆ ಸಂಭ್ರಮದಿಂದ ಆಚರಿಸುವ ಕೃಷಿ ಮತ್ತು ಸೂರ್ಯಾರಾಧನೆಯ ಮಹತ್ವದ ಹಬ್ಬ.

ಭೋಗಿ ಹಬ್ಬ: ದಕ್ಷಿಣ ಭಾರತದಲ್ಲಿ ಸಂಕ್ರಾಂತಿಯ ಪೂರ್ವದಿನವಾಗಿ ಹಳೆಯದನ್ನು ತ್ಯಜಿಸಿ ಹೊಸದನ್ನು ಸ್ವಾಗತಿಸುವ ದಿನ.

ಪೊಂಗಲ್ ಹಬ್ಬ: ಕೃಷಿಕರ ಕೃತಜ್ಞತೆಯ ಹಬ್ಬವಾಗಿ ನಾಲ್ಕು ದಿನಗಳ ಕಾಲ ಸಂಭ್ರಮದಿಂದ ಆಚರಣೆ. ಲೋಹ್ರಿ: ಬೆಳೆ ಕಟಾವು ಹಾಗೂ ಋತು ಬದಲಾವಣೆಯನ್ನು ಸೂಚಿಸುವ ಜನಪದ ಹಬ್ಬ.

### ಜನನ

1875: ಡಾ. ಆಲ್ಬರ್ಟ್ ಶ್ವೆಟ್ಜರ್, ನೊಬೆಲ್ ಶಾಂತಿ ಪ್ರಶಸ್ತಿ ವಿಜೇತ, ವೈದ್ಯ, ತತ್ವಜ್ಞಾನಿ ಮತ್ತು ಮಾನವತಾವಾದಿ

### ಮರಣ

1966: ಲಾಲ್ ಬಹದ್ದೂರ್ ಶಾಸ್ತ್ರಿ, ಭಾರತದ ಎರಡನೇ ಪ್ರಧಾನಮಂತ್ರಿ, ಜೈ ಜವಾನ್ ಜೈ ಕಿಸಾನ್ ಘೋಷಣೆಯ ಮೂಲಕ ಜನಮಾನಸದಲ್ಲಿ ಅಜರಾಮರರಾದ ನಾಯಕ




# ರಚನಾ ಶಾಲೆಯಲ್ಲಿ ಮಕ್ಕಳ ಸಂತೆ-ಆಹಾರ ಮೇಳ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಮಕ್ಕಳಿಗೆ ಆರ್ಥಿಕ ಜ್ಞಾನ ಮತ್ತು ಗ್ರಾಮೀಣ ಭಾಗದ ಜನರ ಬದುಕಿನ ಜೀವನ ಹೇಗಿರುತ್ತೆ ಎಂಬುದನ್ನ ತೋರಿಸಿಕೊಡುವಂತಹ ಒಂದು ಉತ್ತಮ ಕಾರ್ಯಕ್ರಮವೇ ಮಕ್ಕಳ ಸಂತೆ ಎಂದು ರಚನಾ ಪಬ್ಲಿಕ್ ಶಾಲೆಯ ಮುಖ್ಯಸ್ಥ ಪ್ರಕಾಶ್ ಹೇಳಿದರು

ತಾಲೂಕಿನ ಶ್ರವಣಬೆಳಗೊಳದ ರಚನಾ ಪಬ್ಲಿಕ್ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಮಕ್ಕಳ ಸಂತೆ ಹಾಗೂ ಆಹಾರಮೇಳ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಮಕ್ಕಳಿಗೆ ಕೇವಲ ಶೈಕ್ಷಣಿಕ ಜ್ಞಾನವಷ್ಟೇ ಅಲ್ಲದೆ ಪ್ರಾಪಂಚಿಕ ಜ್ಞಾನವನ್ನು ತಿಳಿಸುವಂತಹ ಉದ್ದೇಶ ಇದಾಗಿದೆ. ಮಕ್ಕಳಲ್ಲಿ ಆರ್ಥಿಕ ಜ್ಞಾನಮಟ್ಟವನ್ನು ಮತ್ತು ಗ್ರಾಮೀಣ ಭಾಗದ ಜನರ ಜೀವನ ಹೇಗಿರುತ್ತದೆ ಎಂಬುದನ್ನು ಮಕ್ಕಳ ಸಂತೆ ಮತ್ತು ಆಹಾರ ಮೇಳದಲ್ಲಿ ಅವರು ಪ್ರತ್ಯಕ್ಷವಾಗಿ ನೋಡುವ ಮೂಲಕ ಅದನ್ನು ತಿಳಿಯುವಂತಹ ಒಂದು ಉತ್ತಮ ವೇದಿಕೆ ಇದಾಗಿದೆ ಎಂದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248